ಫೋನ್ ನಂ. 080-22243926
ಫ್ಯಾಕ್ಸ್ ನಂ. 080-22110134
ವೆಬ್‌ಸೈಟ್ : www.kptcl.com
ಇಮೇಲ್ ಐಡಿ: dgmtkptcl@rediffmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

Corporate Identity Number (CIN): U40109KA1999SGC025521

ಕವಿಪ್ರನಿನಿ/ಬಿ19/345/85-86

ನಿಗಮ ಕಾರ್ಯಾಲಯ,
ಕಾವೇರಿ ಭವನ,
ಬೆಂಗಳೂರು-560009,
ದಿನಾಂಕ: 28.10.2021.

## ಸುತ್ತೋಲೆ

**ವಿಷಯ :** ಕವಿಪ್ರನಿನಿಯ ವಿದ್ಯುತ್ ಉಪ-ಕೇಂದ್ರಗಳು ಹಾಗೂ ಪ್ರಸರಣ ಮಾರ್ಗಗಳಲ್ಲಿ ವಿದ್ಯುತ್ ಸಂಬಂಧಿತ ಅಪಘಾತಗಳನ್ನು ತಡೆಯಲು ಗುರುತಿಸಲಾಗಿರುವ ಅಪಾಯಕಾರಿ ಸ್ಥಳಗಳಲ್ಲಿ ಕಾಮಗಾರಿಗಳನ್ನು ನಿರ್ವಹಿಸಿ ಅಪಘಾತಗಳನ್ನು ಪೂರ್ಣವಾಗಿ ತಡೆಗಟ್ಟುವ ಕುರಿತಂತೆ.

**ಉಲ್ಲೇಖ :**
1. ನಿಗಮದ ಸುತ್ತೋಲೆ ಸಂಖ್ಯೆ: ಬಿ28(ಎ)/39946/2013-14 ದಿ: 09.03.2015.
2. ಮುಖ್ಯ ಇಂಜಿನಿಯರ್ (ವಿ), ಟಿ.ಎ ಮತ್ತು ಕ್ಯೂಸಿ ರವರ ಪತ್ರ ಸಂಖ್ಯೆ: FF-06/206-Safety/CEE/TAF&QC/KCO-51/15734/2014-15/9527-40 ದಿ: 23.03.2015.
3. ನಿಗಮದ ಸುತ್ತೋಲೆ ಸಂಖ್ಯೆ: ಕವಿಪ್ರನಿನಿ/ಬಿ19/345/85-86 ದಿ: 09.03.2021.
4. ವ್ಯವಸ್ಥಾಪಕ ನಿರ್ದೇಶಕರವರಿಂದ ಅನುಮೋದಿತ ಟಿಪ್ಪಣಿ ದಿನಾಂಕ: 27.10.2021.

******

ಕವಿಪ್ರನಿನಿಯ ವ್ಯಾಪ್ತಿಯಲ್ಲಿನ ವಿದ್ಯುತ್ ಉಪ-ಕೇಂದ್ರಗಳಲ್ಲಿ ಹಾಗೂ ಪ್ರಸರಣ ಮಾರ್ಗಗಳಲ್ಲಿ ವಿದ್ಯುತ್ ಸಂಬಂಧಿತ ಅಪಘಾತಗಳನ್ನು ತಡೆಯಲು ಉಲ್ಲೇಖ (1)-(3) ರನ್ವಯ ಮಾರ್ಗಸೂಚಿಗಳನ್ನು ನೀಡಲಾಗಿರುತ್ತದೆ. ಮುಂದುವರೆದು, ವಿದ್ಯುತ್ ಅವಘಡಗಳಿಗೆ ಕಾರಣವಾಗಬಹುದಾದ ಅಪಾಯಕಾರಿ ಸ್ಥಳಗಳನ್ನು ಗುರುತಿಸಲಾಗಿದ್ದು, ಅಂತಹ ಸ್ಥಳಗಳಲ್ಲಿ ಸೂಕ್ತ ಮಾರ್ಪಾಡು / ಬಲಪಡಿಸುವ / ಹೆಚ್ಚುವರಿ ಗೋಪುರಗಳನ್ನು ಅಳವಡಿಸುವ ಕಾಮಗಾರಿಗಳನ್ನು ನಿರ್ವಹಿಸಿ ಸುರಕ್ಷಿತಗೊಳಿಸಲು, ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗಕ್ಕೆ ಪ್ರತಿ ತ್ರೈಮಾಸಿಕದ ಅಂತ್ಯಕ್ಕೆ ವರದಿಯನ್ನು ಸಲ್ಲಿಸಲಾಗುತ್ತಿರುತ್ತದೆ.

ಸದರಿ ವರದಿಯ ಆಧಾರದ ಮೇಲೆ, ಆಯೋಗದ ಸಲಹಾ ಸಮಿತಿ ಸಭೆಗಳಲ್ಲಿ ಚರ್ಚಿಸಲಾಗುತ್ತಿದ್ದು, ಈಗಾಗಲೇ ಗುರುತಿಸಿ ಬಾಕಿ ಉಳಿದಿರುವ ಕಾಮಗಾರಿಗಳನ್ನು ನಿರ್ವಹಿಸದೇ ಇರುವುದಕ್ಕೆ ತೀವ್ರ ಆಕ್ಷೇಪಣೆಯನ್ನು ವ್ಯಕ್ತಪಡಿಸಲಾಗುತ್ತಿದ್ದು, ಅತೀ ಜರೂರಾಗಿ ಪ್ರಥಮ ಆದ್ಯತೆಯ ಮೇರೆಗೆ ಗುರುತಿಸಲಾಗಿರುವ ಕಾಮಗಾರಿಗಳನ್ನು ನಿರ್ವಹಿಸಿ ಪೂರ್ಣಗೊಳಿಸಲು ನಿರ್ದೇಶನ ನೀಡಲಾಗಿರುತ್ತದೆ ಹಾಗೂ ಈ ಕುರಿತು ಆಯೋಗಕ್ಕೆ ವರದಿ ನೀಡಲು ಸೂಚಿಸಲಾಗಿರುತ್ತದೆ.

ಕವಿಪ್ರನಿನಿಯ ವಿವಿಧ ವಲಯಗಳಲ್ಲಿ, ಈಗಾಗಲೇ ಗುರುತಿಸಿ, ಆಯೋಗಕ್ಕೆ ವರದಿ ಮಾಡಿರುವ ವಿದ್ಯುತ್ ಅವಘಡಗಳಿಗೆ ಕಾರಣವಾಗಬಹುದಾದ ಅಪಾಯಕಾರಿ ಸ್ಥಳಗಳಲ್ಲಿ ಸೆಪ್ಟಂಬರ್-2021ರ ಅಂತ್ಯಕ್ಕೆ ಕೈಗೊಳ್ಳದೇ ಬಾಕಿ ಉಳಿದಿರುವ ಕಾಮಗಾರಿಗಳ ವಿವರ ಈ ಕೆಳಕಂಡಂತಿದೆ:-

| ಕ್ರ ಸಂ | ಪ್ರಸರಣ ವಲಯ | ಗುರುತಿಸಲಾಗಿರುವ ಸ್ಥಳಗಳ ಒಟ್ಟು ಸಂಖ್ಯೆ | ಪೂರ್ಣಗೊಂಡ ಕಾಮಗಾರಿಗಳ ಸಂಖ್ಯೆ | ಚಾಲನೆಯಲ್ಲಿರುವ ಕಾಮಗಾರಿಗಳ ಸಂಖ್ಯೆ | ಕೈಗೆತ್ತಿಕೊಳ್ಳ- ಬೇಕಾಗಿರುವ ಕಾಮಗಾರಿಗಳ ಸಂಖ್ಯೆ | ಸೆಪ್ಟಂಬರ್-2021ರ ಅಂತ್ಯಕ್ಕೆ ಬಾಕಿ ಉಳಿದಿರುವ ಕಾಮಗಾರಿಗಳ ಸಂಖ್ಯೆ |
|---|---|---|---|---|---|---|
| 1 | ಬಾಗಲಕೋಟೆ | 8 | 3 | 3 | 2 | 5 |
| 2 | ಬೆಂಗಳೂರು | 74 | 4 | 10 | 60 | 70 |
| 3 | ಕಲಬುರಗಿ | 29 | 0 | 3 | 26 | 29 |
| 4 | ತುಮಕೂರು | 21 | 2 | 2 | 17 | 19 |
| 5 | ಹಾಸನ | 21 | 0 | 3 | 18 | 21 |
| 6 | ಮೈಸೂರು | - | - | - | - | - |
| | ಒಟ್ಟು | 153 | 9 | 21 | 123 | 144 |

ವಿದ್ಯುತ್ ಸಂಬಂಧಿತ ಅವಘಡಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ, ತೆಗೆದುಕೊಳ್ಳಲಾಗುತ್ತಿರುವ ಮುಂಜಾಗ್ರತಾ ಕ್ರಮಗಳೊಂದಿಗೆ, ಈಗಾಗಲೇ ಗುರುತಿಸಲಾಗಿರುವ ಸ್ಥಳಗಳಲ್ಲಿ ಕಾಮಗಾರಿಗಳನ್ನು ಅತೀ ಜ಼ರೂರಾಗಿ ನಿರ್ವಹಿಸಿ ಪೂರ್ಣಗೊಳಿಸುವುದು ಅತ್ಯವಶ್ಯಕವಾಗಿರುತ್ತದೆ. ಆದ್ದರಿಂದ, ಸಂಬಂಧಿಸಿದ, ಟಿ.ಎಲ್ & ಎಸ್.ಎಸ್ ವಿಭಾಗದ ಹಾಗೂ ಟಿ.ಎಲ್.ಎಂ ಉಪ-ವಿಭಾಗದ ಅಧಿಕಾರಿಗಳು ಕಾರ್ಯೋನ್ಮುಖರಾಗಿ, ಆದ್ಯತೆಯ ಮೇರೆಗೆ ಕಾಮಗಾರಿಗಳನ್ನು ಪೂರ್ಣಗೊಳಿಸಬೇಕಾಗಿರುತ್ತದೆ.

ಈ ಹಿನ್ನೆಲೆಯಲ್ಲಿ, ಈಗಾಗಲೇ ಗುರುತಿಸಿ ಬಾಕಿ ಉಳಿದಿರುವ ವಿದ್ಯುತ್ ಅವಘಡಗಳಿಗೆ ಕಾರಣವಾಗಬಹುದಾದ ಅಪಾಯಕಾರಿ ಸ್ಥಳಗಳಲ್ಲಿ ನಿರ್ವಹಿಸಬೇಕಾಗಿರುವ ಕಾಮಗಾರಿಗಳನ್ನು ಡಿಸಂಬರ್-2021ರ ಅಂತ್ಯದೊಳಗಾಗಿ ಪೂರ್ಣಗೊಳಿಸಿ ವರದಿ ಸಲ್ಲಿಸಲು ಸೂಚಿಸಲಾಗಿದೆ.

ಕಾಮಗಾರಿಗಳನ್ನು ನಿರ್ವಹಿಸಿ ಪೂರ್ಣಗೊಳಿಸದೇ ನಿರ್ಲಕ್ಷ್ಯ ದೋರಣೆ ತೋರಿದ್ದಲ್ಲಿ, ಸಂಬಂಧಿಸಿದ ಕಾರ್ಯನಿರ್ವಾಹಕ ಇಂಜಿನಿಯರ್ (ವಿ) ರವರುಗಳನ್ನು ನೇರ ಹೊಣೆ ಮಾಡಿ ಅಂತಹವರ ವಿರುದ್ದ ಶಿಸ್ತು ಕ್ರಮ ಕೈಗೊಳ್ಳಲಾಗುವುದೆಂದು ಈ ಮೂಲಕ ತಿಳಿಸಲಾಗಿದೆ. ಸೂಕ್ತ ಮೇಲ್ವಿಚಾರಣೆ ಹಾಗೂ ಪರಿಶೀಲನೆ ನಡೆಸಿ, ಬಾಕಿ ಇರುವ ಕಾಮಗಾರಿಗಳನ್ನು ನಿರ್ವಹಿಸಿ ಪೂರ್ಣಗೊಳಿಸುವಂತೆ ನೋಡಿಕೊಳ್ಳುವುದು ಮುಖ್ಯ ಇಂಜಿನಿಯರ್ (ವಿ), ಪ್ರಸರಣ ವಲಯ ಹಾಗೂ ಅಧೀಕ್ಷಕ ಇಂಜಿನಿಯರ್ (ವಿ), ಪ್ರಸರಣ (ಕಾ/ನಿ) ವೃತ್ತ ರವರುಗಳು ಜವಾಬ್ದಾರಿಯಾಗಿರುತ್ತದೆಂದು ಈ ಮೂಲಕ ಸೂಚಿಸಲಾಗಿರುತ್ತದೆ.

B.R. [signature] 28/10/21

**ಪ್ರಧಾನ ವ್ಯವಸ್ಥಾಪಕರು (ತಾಂತ್ರಿಕ)**
**ಕವಿಪ್ರನಿನಿ**

**ಪ್ರತಿಗಳು:**

1. ಎಲ್ಲಾ ಮುಖ್ಯ ಇಂಜಿನಿಯರುಗಳು (ವಿ), ಕವಿಪ್ರನಿನಿ.
2. ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ) / (ಸಿವಿಲ್), ಕವಿಪ್ರನಿನಿ.
3. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರುಗಳು (ವಿ) /(ಸಿವಿಲ್), ಕವಿಪ್ರನಿನಿ.
4. ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು (ಪ್ರಸರಣ) / ನಿರ್ದೇಶಕರು (ಹಣಕಾಸು)/ /ನಿರ್ದೇಶಕರು (ಆ ಮತ್ತು ಮಾ.ಸಂ) ರವರುಗಳ ಹಿರಿಯ ಆಪ್ತ ಕಾರ್ಯದರ್ಶಿಗಳು, ಕವಿಪ್ರನಿನಿ, ಕಾವೇರಿಭವನ, ಬೆಂಗಳೂರು.

**ಪ್ರತಿ:**

ಅಧೀಕ್ಷಕ ಇಂಜಿನಿಯರ್(ವಿ), (ಐಟಿ), ಕವಿಪ್ರನಿನಿ, ಬೆಂಗಳೂರುರವರಿಗೆ - ನಿಗಮದ ಅಂತರ್ಜಾಲದಲ್ಲಿ ಪ್ರಕಟಿಸಲು.